ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಅಂಗನವಾಡಿ ಕೇಂದ್ರಗಳ ಸಂಖ್ಯೆ

1797(2136): ಶ್ರೀ ಹೊನ್ನಾಳಿ ಜಬ್ಬರ್‌ಖಾನ್ ಹೈಯತ್‌ಖಾನ್ (ಹುಬ್ಬಳ್ಳಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಇರುವ ಅಂಗನವಾಡಿ ಪಾಲಿಕೆಯಲ್ಲಿ ಇರುವ ಅಂಗನವಾಡಿ ಕೇಂದ್ರಗಳೆಷ್ಟು?

ಆ. ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ.

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ: 110

ಆ. ಇಲ್ಲ, ಐಸಿಡಿಎಸ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು ಹೊಸ ಅಂಗನವಾಡಿ ಕೇಂದ್ರಗಳನ್ನು ಕೇಂದ್ರ ಸರ್ಕಾರದ ಅನುಮತಿ ದೊರೆತ ನಂತರ ಪ್ರಾರಂಭಿಸಲಾಗುತ್ತದೆ. ದಿನಾಂಕ: 16.09.02ರ ಕೇಂದ್ರ ಸರ್ಕಾರದ ಪತ್ರದಲ್ಲಿ ಯೋಜನಾ ಆಯೋಗದಿಂದ ಹೆಚ್ಚುವರಿ ಸಂಪನ್ಮೂಲ ಒದಗಿಸಿದಾಗ ಹೊಸ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು ಎಂದು ತಿಳಿಸಿರುತ್ತದೆ.

ರಾಜ್ಯದಲ್ಲಿ ಜಾನುವಾರುಗಳ ಪಾಲನೆಗಾಗಿ ಗೋಶಾಲೆಗಳನ್ನು ಆರಂಭಿಸುವುದು

1799(2320): ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ರಾಜ್ಯದಲ್ಲಿ ಬರಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಜಾನುವಾರುಗಳ ಪಾಲನೆಗಾಗಿ ಗೋಶಾಲೆಗಳನ್ನು ಆರಂಭಿಸಲಾಗಿದೆಯೆ:

ಆ. ಹಾಗಿದ್ದರೆ, ಯಾವ ಯಾವ ಜಿಲ್ಲೆಗಳಲ್ಲಿ ಮತ್ತು ತಾಲ್ಲೂಕುಗಳಲ್ಲಿ ಗೋಶಾಲೆಗಳನ್ನು ಆರಂಭಿಸಲಾಗಿದೆ:

ಇ. ಗೋಶಾಲೆಗಳನ್ನು ಸ್ಥಾಪಿಸಿರುವುದಿಲ್ಲವೆಂದು ರೈತರು ದೂರಿದ್ದು ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗುವುದು:

ಈ. ಕಳೆದ ವರ್ಷ ಸ್ಥಾಪಿಸಿದ್ದು ಅನೇಕ ಗೋಶಾಲೆಗಳನ್ನು ಅಧಿಕಾರಿಗಳ ನಿರ್ಲಕ್ಷ್ಯದಿಂದ ಮುಚ್ಚಿರುವುದು ನಿಜವೆ: ಹಾಗಿದ್ದರೆ, ಇವುಗಳನ್ನು ಪುನಃ ತೆರೆಯಲಾಗುವುದೇ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ. ಪ್ರಸಕ್ತ ಸಾಲಿನಲ್ಲಿ ಗೋಶಾಲೆಗಳನ್ನು ಪ್ರಾರಂಭಿಸಿರುವುದಿಲ್ಲ.

ಆ. ಉದ್ಭವಿಸುವುದಿಲ್ಲ.

ಇ. ಯಾವುದೇ ದೂರನ್ನು ಸ್ವೀಕರಿಸಿರುವುದಿಲ್ಲ

ಈ. ಕಳೆದ ವರ್ಷ ಪರಿಸ್ಥಿತಿ ಸುಧಾರಿಸಿದ್ದರಿಂದ ಗೋಶಾಲೆಗಳನ್ನು ಮುಚ್ಚಲಾಯಿತು ಪರಿಸ್ಥಿತಿಗೆ ಅನುಗುಣವಾಗಿ ಅವಶ್ಯವಿದ್ದಲ್ಲಿ ಗೋಶಾಲೆಗಳನ್ನು ತೆರೆಯಲು ಕ್ರಮವನ್ನು ತೆಗೆದುಕೊಳ್ಳಬಹುದಾಗಿದೆ.